# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 159 | Pages. 2 | Date: 31-05-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 159 - ಪುಟಗಳು : 2 | 31-05-2026 | ಭಾನುವಾರ | Ph: 8762954248 | ದರ : ₹1


# 24 ಲಕ್ಷ ನಷ್ಟವಾದರೂ ಎಫ್‌ಐಆರ್ ಇಲ್ಲ

## ಶೆಡ್ ಧ್ವಂಸ ಪ್ರಕರಣಕ್ಕೆ ನ್ಯಾಯ ಎಲ್ಲಿದೆ : ಎಸ್ಪಿ ಕಚೇರಿ ಮೆಟ್ಟಿಲೇರಿದ ಯಶ್ ತಾಯಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ, ಮೇ 30: ನಗರದ ವಿದ್ಯಾನಗರದಲ್ಲಿರುವ ನಟ ಯಶ್ ಅವರ ತಾಯಿ ಪುಷ್ಪಾ ಅವರ ಮಾಲೀಕತ್ವದ ಶೆಡ್ ಹಾಗೂ ಕಾಂಪೌಂಡ್ ಧ್ವಂಸಗೊಳಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪುಷ್ಪಾ ಅವರು ಶನಿವಾರ ಹಾಸನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್ಪಿ) ಅವರನ್ನು ಭೇಟಿ ಮಾಡಿ ನ್ಯಾಯ ಒದಗಿಸುವಂತೆ ಮನವಿ ಸಲ್ಲಿಸಿದರು.

ಇದೆ ವೇಳೆ ಕನ್ನಡ ಚಲನ ಚಿತ್ರ ನಾಯಕ ನಟ ಯಶ್ ತಾಯಿ ಮಾಧ್ಯಮದೊಂದಿಗೆ ಮಾತನಾಡಿ, ಈ ಪ್ರಕರಣದಲ್ಲಿ ಸುಮಾರು 24 ಲಕ್ಷ ರೂ. ಮೌಲ್ಯದ ಆಸ್ತಿ ಹಾನಿಯಾಗಿದ್ದರೂ ಇದುವರೆಗೆ ಎಫ್‌ಐಆರ್ ದಾಖಲಿಸದಿರುವುದು ಪೊಲೀಸರ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಪುಷ್ಪಾ ಆರೋಪಿಸಿದರು. ಇದೇ ವಿಚಾರವಾಗಿ ಮೂರು ದಿನಗಳ ಹಿಂದೆ ಅವರು ರಾಜ್ಯ ಪೊಲೀಸ್ ಮಹಾನಿರ್ದೇಶಕರನ್ನು (ಡಿಜಿಪಿ) ಭೇಟಿ ಮಾಡಿ ದೂರು ಸಲ್ಲಿಸಲಾಗಿದೆ. ಹಾಸನ ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿರುವ ಈ ಘಟನೆಯಲ್ಲಿ ದೇವರಾಜ್, ಧರ್ಮ ಸೇರಿದಂತೆ ಹಲವರ ವಿರುದ್ಧ ದೂರು ನೀಡಲಾಗಿತ್ತು. ಆದರೆ ದೂರು ಆಧರಿಸಿ ಕ್ರಿಮಿನಲ್ ಪ್ರಕರಣ ದಾಖಲಿಸುವ ಬದಲು ಪೊಲೀಸರು ಕೇವಲ ಎನ್‌ಸಿಆರ್ ದಾಖಲಿಸಿಕೊಂಡಿದ್ದಾರೆ ಎಂದು ದೂರಿದರು. ಇದರಿಂದ ನ್ಯಾಯಾಲಯದ ಮೊರೆ ಹೋಗಬೇಕಾಯಿತು.

ಪುಷ್ಪಾ ಅವರ ಸಂಬಂಧಿಕ ದುರ್ಗಾಪ್ರಸಾದ್ ಅವರು ಘಟನೆಯ ಕುರಿತ ಡಿಜಿಟಲ್ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ಹಾಸನದ ಜೆಎಂಎಫ್‌ಸಿ ನ್ಯಾಯಾಲಯಕ್ಕೆ ಖಾಸಗಿ ದೂರು ಸಲ್ಲಿಸಿದ್ದರು. ದೂರಿನ ವಿಚಾರಣೆ ನಡೆಸಿದ ನ್ಯಾಯಾಲಯವು ಪ್ರಕರಣದ ಕುರಿತು ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯನ್ನು ಭೇಟಿ ಮಾಡಿ ಮನವಿ ಸಲ್ಲಿಸುವಂತೆ ನಿರ್ದೇಶನ ನೀಡಿದೆ ಎಂದರು.

ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಇಂದು ಶನಿವಾರ ಪುಷ್ಪಾ ಅವರು ಹಾಸನ ಎಸ್ಪಿ ಕಚೇರಿಗೆ ಆಗಮಿಸಿ ಪ್ರಕರಣದ ದಾಖಲೆಗಳು ಹಾಗೂ ಮಾಹಿತಿ ಸಲ್ಲಿಸಿದರು. ಘಟನೆಗೆ ಸಂಬಂಧಿಸಿದಂತೆ ತಪ್ಪಿತಸ್ಥರ ವಿರುದ್ಧ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕು ಎಂದು ಅವರು ಒತ್ತಾಯಿಸಿದರು. ಪ್ರಕರಣವು ಇದೀಗ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳ ಗಮನ ಸೆಳೆದಿದ್ದು, ನ್ಯಾಯಾಲಯದ ನಿರ್ದೇಶನದ ಬಳಿಕ ಮುಂದಿನ ಬೆಳವಣಿಗೆಗಳು ಕುತೂಹಲ ಮೂಡಿಸಿವೆ. ಎಸ್ಪಿ ಮಟ್ಟದಲ್ಲಿ ಪ್ರಕರಣದ ಮರುಪರಿಶೀಲನೆ ನಡೆಯುವ ಸಾಧ್ಯತೆ ಇದ್ದು, ದೂರುದಾರರು ನ್ಯಾಯಕ್ಕಾಗಿ ಹೋರಾಟ ಮುಂದುವರಿಸುವುದಾಗಿ ತಿಳಿಸಿದ್ದಾರೆ.

# ಕರ್ತವ್ಯಪ್ರಜ್ಞೆಯಿಂದ ಭಾರಿ ದುರಂತ ತಪ್ಪಿಸಿದ ಸಾರಿಗೆ ಅಧಿಕಾರಿ!



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ-75ರ ಕಂದಲಿ ಸಮೀಪ ಸಂಭವಿಸಬಹುದಾಗಿದ್ದ ಭಾರೀ ಅವಘಡವನ್ನು ಹಿರಿಯ ಮೋಟಾರು ವಾಹನ ನಿರೀಕ್ಷಕ ಪಿ.ಆರ್. ಯಶವಂತ್ ಅವರ ಸಮಯಪ್ರಜ್ಞೆ ಮತ್ತು ಧೈರ್ಯ ಸಾಹಸ ತಡೆದಿದೆ.

ಸಕಲೇಶಪುರದಿಂದ ಹಾಸನಕ್ಕೆ ತಮ್ಮ ಜೀಪ್‌ನಲ್ಲಿ ಹಿಂದಿರುಗುತ್ತಿದ್ದ ವೇಳೆ, ಮುಂದೆ ಸಾಗುತ್ತಿದ್ದ ಇಂಧನ ಸಾಗಣೆ ಟ್ಯಾಂಕರ್ ಲಾರಿಯ ಎಂಜಿನ್‌ನಲ್ಲಿ ಬೆಂಕಿ ಕಾಣಿಸಿಕೊಂಡಿರುವುದನ್ನು ಅವರು ಗಮನಿಸಿದ್ದಾರೆ. ಕೂಡಲೇ ಪರಿಸ್ಥಿತಿಯ ಗಂಭೀರತೆಯನ್ನು ಅರಿತ ಯಶವಂತ್ ಅವರು ತಮ್ಮ ವಾಹನದಲ್ಲಿ ಲಾರಿಯನ್ನು ಹಿಂದಿಕ್ಕಿ ನಿಲ್ಲಿಸಿ, ಚಾಲಕ ಹಾಗೂ ನಿರ್ವಾಹಕರನ್ನು ಸುರಕ್ಷಿತವಾಗಿ ಕೆಳಗಿಳಿಸಿದ್ದಾರೆ.

ನಂತರ ಲಾರಿಯಲ್ಲಿದ್ದ ಫೈರ್ ಎಕ್ಸ್ಟಿಂಗ್ವಿಷರ್ ಬಳಸಿ ಚಾಲಕರ ನೆರವಿನಿಂದ ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಸಮಯಕ್ಕೆ ಸರಿಯಾಗಿ ಕ್ರಮ ಕೈಗೊಳ್ಳದಿದ್ದರೆ ಇಂಧನ ತುಂಬಿದ್ದ ಟ್ಯಾಂಕರ್‌ನಲ್ಲಿ ಬೆಂಕಿ ವ್ಯಾಪಿಸಿ ದೊಡ್ಡ ಪ್ರಮಾಣದ ಸ್ಫೋಟ ಸಂಭವಿಸುವ ಸಾಧ್ಯತೆ ಇತ್ತು ಎಂದು ತಿಳಿದುಬಂದಿದೆ.

ಅಧಿಕಾರಿಯ ಕರ್ತವ್ಯನಿಷ್ಠೆ, ಸಮಯಪ್ರಜ್ಞೆ ಹಾಗೂ ಧೈರ್ಯದಿಂದ ಸಂಭವಿಸಬಹುದಾಗಿದ್ದ ಭಾರೀ ದುರಂತ ತಪ್ಪಿದ್ದು, ಸಾರ್ವಜನಿಕ ವಲಯದಲ್ಲಿ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ.

# ವೃತ್ತಿಪರತೆಗೆ ಇನ್ನೊಂದು ಹೆಸರು ಸತ್ಯಮೂರ್ತಿ ನಿವೃತ್ತರ ಬೀಳ್ಕೊಡುಗೆಯಲ್ಲಿ ಶ್ಲಾಘನೆ

## ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಲಕ್ಷ್ಮೀಪತಿ ಅಭಿಪ್ರಾಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಆತ್ಮೀಯತೆ ಜತೆಗೆ ನಿಷ್ಠೂರವಾದಿ ಕಾರ್ಯಶೈಲಿಯನ್ನು ಮೈಗೂಡಿಸಿಕೊಂಡ ಕೆ.ಟಿ. ಸತ್ಯಮೂರ್ತಿಯವರ ವೃತ್ತಿಪರತೆ ಅತ್ಯಂತ ಶ್ಲಾಘನೀಯ ಎಂದು ಕಾಲೇಜು ಶಿಕ್ಷಣ ಇಲಾಖೆಯ ಆಡಳಿತ ವಿಭಾಗದ ಜಂಟಿ ನಿರ್ದೇಶಕರಾದ ಲಕ್ಷ್ಮೀಪತಿ ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಕಲಾ ವಾಣಿಜ್ಯ ಮತ್ತು ಸ್ನಾತಕೋತ್ತರ ಕಾಲೇಜಿನಲ್ಲಿ ನಡೆದ ಪತ್ರಾಂಕಿತ ವ್ಯವಸ್ಥಾಪಕ ಸತ್ಯಮೂರ್ತಿ ಕೆ.ಟಿ. ಅವರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದ ಅವರು, ಇಲಾಖೆಯಿಂದ ನಿಯೋಜಿಸಿದ ನಿಯೋಜಿಸದ ಎರಡೂ ಕೆಲಸವನ್ನು ಅತ್ಯಂತ ಶ್ರದ್ಧೆಯಿಂದ ನಿರ್ವಹಿಸಿದ ಸತ್ಯ ಮೂರ್ತಿ ಅವರು ಕಾಲೇಜಿನ ಘನತೆಯನ್ನು ಎತ್ತಿ ಹಿಡಿಯುವ ಕೆಲಸ ಮಾಡಿದ್ದಾರೆ ಎಂದರು.

ವೃತ್ತಿ ನಿವೃತ್ತಿ ವೇಳೆ ಅಭಿಮಾನ ಸ್ವೀಕರಿಸಿ ಮಾತನಾಡಿದ ಸತ್ಯಮೂರ್ತಿ ಕೆ.ಟಿ. ಅವರು, ಎಲ್ಲರ ಸಹಕಾರದೊಂದಿಗೆ ಹೊಂದಾಣಿಕೆಯಿಂದ ಕಾರ್ಯ ನಿರ್ವಹಿಸಿದ್ದರಿಂದಲೇ ಅಭಿವೃದ್ಧಿ ಕೆಲಸಗಳನ್ನು ಮಾಡಲಾಗಿದೆ. ಕುಟುಂಬದ ಬೆಂಬಲದೊಂದಿಗೆ ಒಳ್ಳೆ ಕೆಲಸ ಮಾಡಿದ ಆತ್ಮತೃಪ್ತಿಯಿಂದ ನಿವೃತ್ತಿ ಹೊಂದುತ್ತಿದ್ದೇನೆ ಎಂದ ಅವರು ವೃತ್ತಿ ಬದುಕಿನುದ್ದಕ್ಕೂ ಸಹಕರಿಸಿದ ಹಲವರನ್ನು ಸ್ಮರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲ ಡಿ.ಎಸ್. ರಾಜುರವರು, ಆಡಳಿತ ವರ್ಗದ ಮುಖ್ಯಸ್ಥರಾಗಿದ್ದ ಸತ್ಯಮೂರ್ತಿ ಅವರು ಪ್ರಾಂಶುಪಾಲರುಗಳ ಬೆನ್ನೆಲುಬಾಗಿ ನಿರಂತರವಾಗಿ ಕೆಲಸ ಮಾಡಿದ್ದಾರೆ. ಸರ್ಕಾರಿ ಕಲಾ ಕಾಲೇಜಿನ ಬೆಳವಣಿಗೆಯ ಪ್ರತೀ ಹಂತದಲ್ಲೂ ಅವರ ನೇರ ಶ್ರಮವಿದೆ ಎಂದರು. ನಿವೃತ್ತಿ ಜೀವನ ಸಮಾಜಮುಖಿಯಾಗಿರಲಿ ಎಂದು ಹಾರೈಸಿದರು.

ಸತತ 39 ವರ್ಷಗಳ ಕಾಲ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸಿ ವಯೋನಿವೃತ್ತಿ ಹೊಂದಿದ ಸತ್ಯಮೂರ್ತಿ ಕೆ.ಟಿ. ರವರ ಬಗ್ಗೆ ಅಭಿಮಾನದಲ್ಲಿ ಮಾತನಾಡಿದ ಸಹೋದ್ಯೋಗಿಗಳು ಮತ್ತು ಒಡನಾಡಿಗಳ ಬೃಹತ್ ಬಳಗ ಸತ್ಯಮೂರ್ತಿ ಅವರ ಶಿಸ್ತಿನ ಕಾರ್ಯವೈಖರಿ ಮತ್ತು ಎಲ್ಲರನ್ನು ಒಳಗೊಳ್ಳುವ ಸ್ನೇಹಪರತೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಹವ್ಯಾಸಿ ಕಲಾವಿದ, ರಂಗ ಸಂಘಟಕರಾಗಿಯೂ ತೊಡಗಿಸಿಕೊಂಡಿರುವ ಇವರ ಜನಪರ ವ್ಯಕ್ತಿತ್ವದ ನಿದರ್ಶನ ಕಾರ್ಯಕ್ರಮದುದ್ದಕ್ಕೂ ಕಂಡು ಬಂದಿತು.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು, ಪ್ರಾಧ್ಯಾಪಕರು, ಆಡಳಿತ ವರ್ಗ ಮತ್ತು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಾಲೇಜಿನ ಕನ್ನಡ ಪ್ರಾಧ್ಯಾಪಕ ದೇವರಾಜು ಹೆಚ್.ಡಿ. ಕಾರ್ಯಕ್ರಮ ನಿರೂಪಿಸಿದರು. ಡಾ. ಶಶಿಕುಮಾರ್ ಸ್ವಾಗತಿಸಿದರು. ಸುಬ್ರಹ್ಮಣ್ಯ ಪ್ರಾರ್ಥಿಸಿದರು.

# ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಪಡೆದ ವಿದ್ಯಾರ್ಥಿಗೆ ಸನ್ಮಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ವಿದ್ಯೆಯನ್ನು ಅರಸಿ ಶಿಸ್ತು, ಶ್ರದ್ದೆ ಹಾಗೂ ಭಕ್ತಿಯಿಂದ ಮುನ್ನಡೆದವರು ಜೀವನದಲ್ಲಿ ಎಂದಿಗೂ ಸೋಲು ಕಾಣಲು ಸಾಧ್ಯವಿಲ್ಲ ಎಂದು ನುಗ್ಗೇಹಳ್ಳಿ ಪುರವರ್ಗ ಹಿರೇಮಠದ ಶ್ರೀ ಮಹೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ನುಗ್ಗೆಹಳ್ಳಿ ಪುರವರ್ಗ ಹಿರೇಮಠದಲ್ಲಿ, ಪ್ರಸ್ತುತ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.96 ಅಂಕಗಳನ್ನು ಪಡೆದು ಉತ್ತೀರ್ಣಗೊಂಡಿರುವ ವಿದ್ಯಾರ್ಥಿ ಅಭ್ಯುದಯ್ ಅವರಿಗೆ ಅಭಿನಂದಿಸಿ ಮಾತನಾಡಿ, ಎಸ್‌ಎಸ್‌ಎಲ್ಸಿ ಫಲಿತಾಂಶ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಮೆಟ್ಟಿಲು ಎಂದರು.

ಸರ್ಕಾರಿ ಉನ್ನತ ಹುದ್ದೆಗಳನ್ನು ಅರಸಿ ತಮ್ಮ ಮಕ್ಕಳಿಗೆ ಹೆಚ್ಚು ಹಣ ವ್ಯಯ ಮಾಡಿ ವಿದ್ಯೆ ಕೊಡಿಸುವ ಬದಲು ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಿ ತಲೆ ಎತ್ತಿ ನಿಂತು ಮೌಲ್ಯಯುತ ಬದುಕನ್ನು ಕಟ್ಟಿಕೊಳ್ಳುವ ನಿಟ್ಟಿನಲ್ಲಿ ಜ್ಞಾನ ಸಂಪಾದಿಸುವಷ್ಟು ವಿದ್ಯೆ ಕಲ್ಪಿಸಿದರೆ ಸಾಕು ಎಂದು ಪಾಲಕರಿಗೆ ಕಿವಿ ಮಾತು ಹೇಳಿದರು.

ಓದಿದ ಎಲ್ಲರಿಗೂ ಸರ್ಕಾರಿ ಉದ್ಯೋಗ ಸಿಗುವುದು ಸುಲಭದ ಮಾತಲ್ಲ. ಬದಲಿಗೆ ಅಪಾರ ಜ್ಞಾನ ಸಂಪತ್ತು ಪಡೆದು ವಿದ್ಯಾರ್ಥಿಗಳು ಸ್ವಂತ ಕಾಲ ಮೇಲೆ ನಿಂತು ಉದ್ಯೋಗ ಸೃಷ್ಟಿಸಿ ಇತರರಿಗೂ ಉದ್ಯೋಗ ನೀಡುವಂತೆ ಬೆಳೆಯಬೇಕು. ಉದ್ಯೋಗ ಸೃಷ್ಟಿಸಲು ಅನೇಕ ಕ್ಷೇತ್ರಗಳು ಕಣ್ಣ ಮುಂದಿವೆ. ಅವುಗಳನ್ನು ಗ್ರಹಿಸುವ ಶಕ್ತಿ ಶಿಕ್ಷಣದಲ್ಲಿದೆ ಎಂದು ತಿಳಿಸಿದರು.

ಇಂದು ಆಧುನಿಕ ಯಂತ್ರೋಪಕರಣಗಳ ನಡುವೆ ಕಣ್ಮರೆಗೆ ಸರಿಯುತ್ತಿರುವ ಮೂಲ ಕೃಷಿ ಪದ್ಧತಿಯನ್ನು ಉಳಿಸಿ ಮುಖ್ಯ ಭೂಮಿಕೆಗೆ ಅಥವಾ ಪ್ರಚಲಿತಕ್ಕೆ ತರಲು ಸಹ ಉತ್ತಮ ಹಾಗೂ ಮೌಲ್ಯಯುತ ಶಿಕ್ಷಣ ಅಗತ್ಯವಿದೆ. ಭೂಮಿ ಹಾಗೂ ಕೃಷಿ ಉಳಿಯಬೇಕು ಎಂದು ಕಳವಳ ವ್ಯಕ್ತಪಡಿಸಿದರು.

ಸಂಪಾದನೆಗೋಸ್ಕರ ಶಿಕ್ಷಣ ಕಲಿಯುವುದಾದರೆ ಅದು ವ್ಯರ್ಥ. ತನ್ನ ಹಾಗೂ ಸುತ್ತಮುತ್ತಲಿನ ಸಮಾಜದ ಪರಿವರ್ತನೆಗಾಗಿ ಶಿಕ್ಷಣ ಪಡೆದರೆ ಮಾತ್ರ ಬದುಕು ಸಾರ್ಥಕವಾಗಲಿದೆ. ಜೊತೆಗೆ ಕಲಿತ ವಿದ್ಯೆಯನ್ನು ಇತರರಿಗೆ ದಾನ ಮಾಡುವುದು ಸಹ ಒಂದು ಸಮಾಜ ಸೇವೆ ಎಂದು ಸಲಹೆ ನೀಡಿದರು.

ನಂತರ ಮೈಸೂರಿನ ರಾಮಕೃಷ್ಣ ಆಶ್ರಮದ ಪ್ರೌಢಶಾಲೆಯಲ್ಲಿ ಶಿಕ್ಷಣ ಪಡೆದು ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ96 ರಷ್ಟು ಅಂಕಗಳನ್ನು ಗಳಿಸಿ ಹುಟ್ಟಿದ ಊರು ಹಾಗೂ ಹೆತ್ತವರಿಗೆ ಕೀರ್ತಿ ತಂದಿರುವ ನುಗ್ಗೇಹಳ್ಳಿ ಗ್ರಾಮದ ನೇತ್ರ ಮತ್ತು ಎಂ.ಉಮೇಶ್ ಅವರ ಸುಪುತ್ರ ವಿದ್ಯಾರ್ಥಿ ಅಭ್ಯುದಯ್ ಅವರಿಗೆ ಶ್ರೀಗಳು ಅಭಿನಂದಿಸಿ ಆಶೀರ್ವಾದ ನೀಡಿದರು.

ಶ್ರೀಮಠದ ಸದ್ಭಕ್ತರಾದ ಎನ್.ಕೆ.ಪ್ರಭುಸ್ವಾಮಿ, ಪ್ರಶಾಂತ್ ಕುಮಾರ್ ಹಾಗೂ ಸಿದ್ದಲಿಂಗ ಸ್ವಾಮಿ, ವಿದ್ಯಾರ್ಥಿಯ ಪಾಲಕರಾದ ಶ್ರೀಮತಿ ನೇತ್ರ, ಎಂ.ಉಮೇಶ್ ಮತ್ತು ಕುಟುಂಬ ವರ್ಗ ಹಾಜರಿದ್ದರು.

# ಸುಳ್ಳು ಆರೋಪಗಳಿಂದ ಮಾನಹಾನಿ : ಸಯ್ಯದ್ ಮುಫೀಜ್ ಆಕ್ರೋಶ

## ಕೋಮು ಸೌಹಾರ್ದತೆ ಕೆಡಿಸುವ ಸಂಚು ಆರೋಪ : ವೈರಲ್ ವಿಡಿಯೋ ತನಿಖೆಗೆ ಒತ್ತಾಯ



ಸಕಲೇಶಪುರ: ತಮ್ಮ ವಿರುದ್ಧ ಸಂಪೂರ್ಣ ಸುಳ್ಳು, ಕಲ್ಪಿತ ಹಾಗೂ ಆಧಾರರಹಿತ ಆರೋಪಗಳನ್ನು ಮಾಡಿ ವೈಯಕ್ತಿಕ ಮತ್ತು ವೃತ್ತಿಪರ ಗೌರವಕ್ಕೆ ಧಕ್ಕೆ ತರಲು ಯತ್ನಿಸಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಸಕಲೇಶಪುರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಹಾಗೂ ಪುರಸಭೆಯ ಮಾಜಿ ಅಧ್ಯಕ್ಷ ಸಯ್ಯದ್ ಮುಫೀಜ್ ಆಗ್ರಹಿಸಿದರು.

ಶುಕ್ರವಾರ ತಮ್ಮ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿಂದೂ ಹಿತರಕ್ಷಣಾ ವೇದಿಕೆಯ ಮಂಜುನಾಥ ಕಬ್ಬಿನಗದ್ದೆ, ಶಿವಾನಂದ, ರಘು ಸಕಲೇಶಪುರ ಸೇರಿದಂತೆ ಕೆಲವರ ವಿರುದ್ಧ ವೃತ್ತ ನಿರೀಕ್ಷಕರಿಗೆ ದೂರು ಸಲ್ಲಿಸಿರುವುದಾಗಿ ತಿಳಿಸಿದರು.

ಉಪವಿಭಾಗಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ತಮ್ಮ ವಿರುದ್ಧ ದ್ವೇಷಪೂರಿತ ಹಾಗೂ ಆಧಾರರಹಿತ ಆರೋಪಗಳನ್ನು ಮಾಡಲಾಗಿದೆ ಎಂದು ದೂರಿದ ಅವರು, ಆರೋಪಗಳಲ್ಲಿ ಉಲ್ಲೇಖಿಸಿರುವ ಕಾಫಿ ತೋಟಕ್ಕೂ ತಮ್ಮ ಹೋಂಸ್ಟೇ ಹಾಗೂ ಜಾಗಕ್ಕೂ ಯಾವುದೇ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿದರು.

''ಬೇರೆಡೆ ನಡೆದ ಘಟನೆಯನ್ನು ನನ್ನ ಜಾಗಕ್ಕೆ ಸಂಬಂಧಿಸಿ ಸುಳ್ಳು ಕಥೆ ಕಟ್ಟಲಾಗಿದೆ. ನನ್ನ ಹೋಂಸ್ಟೇ ಜಾಗದ ಗಡಿ ಗುರುತು, ಆರ್‌ಟಿಸಿ ಹಾಗೂ ಅಧಿಕೃತ ನಕ್ಷೆ ದಾಖಲೆಗಳನ್ನು ಪೊಲೀಸರಿಗೆ ಸಲ್ಲಿಸಿದ್ದೇನೆ. ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದೇನೆ ಅಥವಾ ವಾಹನ ಸಂಚಾರಕ್ಕೆ ತೊಂದರೆ ಉಂಟುಮಾಡಿದ್ದೇನೆ ಎಂಬ ಆರೋಪಗಳು ಸತ್ಯಕ್ಕೆ ದೂರವಾಗಿವೆ'' ಎಂದು ಹೇಳಿದರು.

''ಕುಶಾಲನಗರ ಬಡಾವಣೆಗೆ ದನದ ಮಾಂಸ ಹಂಚುತ್ತೇನೆ'' ಎಂಬ ಆರೋಪ ಸಮಾಜದಲ್ಲಿ ಕೋಮು ದ್ವೇಷ ಬಿತ್ತುವ ಉದ್ದೇಶದಿಂದ ಹೆಣೆದ ಸುಳ್ಳಾಗಿದೆ. ಸಾಮಾಜಿಕ ಜಾಲತಾಣಗಳು ಹಾಗೂ ವಾಟ್ಸಪ್ ಗುಂಪುಗಳಲ್ಲಿ ವೈರಲ್ ಆಗಿರುವ ವಿಡಿಯೋವನ್ನು ಸೂಕ್ಷ್ಮವಾಗಿ ಪರಿಶೀಲಿಸಿದರೆ ನೈಜ ಸತ್ಯ ಹೊರಬೀಳುತ್ತದೆ ಎಂದು ತಿಳಿಸಿದರು.

ಸಕಲೇಶಪುರ ಸಮೀಪದ ಗ್ರಾಮವೊಂದರ ಕಾಫಿ ತೋಟದಲ್ಲಿ ಕಟ್ಟಲಾಗಿದ್ದ ದನವು ಸಂಪೂರ್ಣ ಆರೋಗ್ಯವಾಗಿದ್ದು, ಅದಕ್ಕೆ ಹುಲ್ಲು ಮತ್ತು ನೀರು ನೀಡುತ್ತಿರುವ ದೃಶ್ಯಗಳು ವಿಡಿಯೋದಲ್ಲೇ ದಾಖಲಾಗಿವೆ ಎಂದು ಹೇಳಿದರು.

ಪೊಲೀಸರಿಗೆ ಮಾಹಿತಿ ನೀಡದೆ ಕೆಲವರು ಕಾನೂನನ್ನು ಕೈಗೆತ್ತಿಕೊಂಡು ದನವನ್ನು ವಾಹನಕ್ಕೆ ಹತ್ತಿಸಿದ್ದಾರೆ. ಈ ವೇಳೆ ಅದರ ಕುತ್ತಿಗೆಗೆ ಹಗ್ಗವನ್ನು ಬಿಗಿಯಾಗಿ ಕಟ್ಟಿ ಕ್ರೂರವಾಗಿ ವರ್ತಿಸಲಾಗಿದೆ. ವಿಡಿಯೋದಲ್ಲಿ ದನವು ನಿಶಕ್ತಗೊಂಡು ವಾಹನದಲ್ಲೇ ಸಾವನ್ನಪ್ಪಿರುವುದು ಸ್ಪಷ್ಟವಾಗಿ ಕಾಣುತ್ತದೆ ಎಂದು ಆರೋಪಿಸಿದರು. ''ದನಕ್ಕೆ ಆಹಾರ ಹಾಗೂ ನೀರು ನೀಡದೇ ಸಾವನ್ನಪ್ಪಿದೆ ಎಂದು ಬಿಂಬಿಸಲು ಪ್ರಯತ್ನಿಸಲಾಗುತ್ತಿದೆ. ಆದರೆ ಅವರೇ ಚಿತ್ರೀಕರಿಸಿರುವ ವಿಡಿಯೋದಲ್ಲಿ ಚಿತ್ರಹಿಂಸೆಯೇ ದನದ ಸಾವಿಗೆ ಕಾರಣವಾಗಿರುವುದು ಗೋಚರಿಸುತ್ತದೆ'' ಎಂದು ಹೇಳಿದರು. ದನ ಸಾವನ್ನಪ್ಪಿದ ನಂತರವೇ ಪೊಲೀಸರಿಗೆ ಮಾಹಿತಿ ನೀಡಲಾಗಿದೆ. ಬಳಿಕ ಮೃತ ದನವನ್ನು ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಸುವ ಉದ್ದೇಶದಿಂದ ಆನೆಮಹಾಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಾದಿತ ಜಾಗದಲ್ಲಿ ಹೂಳಲು ಯತ್ನಿಸಿದ್ದು, ಸಾರ್ವಜನಿಕರ ವಿರೋಧದ ಹಿನ್ನೆಲೆಯಲ್ಲಿ ಬೇರೆಡೆ ದಫನ ಮಾಡಲಾಗಿದೆ ಎಂದು ಆರೋಪಿಸಿದರು.

''ಬಕ್ರೀದ್ ಹಬ್ಬಕ್ಕಾಗಿ ಮುಸ್ಲಿಮರು ಕುರ್ಬಾನಿಗೆ ತಂದಿದ್ದರು ಎಂಬ ಸುಳ್ಳು ಪ್ರಚಾರ ನಡೆಸಲಾಗುತ್ತಿದೆ. ಉದ್ದೇಶ ಪ್ರಾಮಾಣಿಕವಾಗಿದ್ದರೆ ಮೊದಲೇ ಪೊಲೀಸರಿಗೆ ಮಾಹಿತಿ ನೀಡಬೇಕಿತ್ತು. ದನವನ್ನು ಹಿಂಸಾತ್ಮಕವಾಗಿ ವಾಹನಕ್ಕೆ ಏರಿಸುವ ಅಗತ್ಯವೇನಿತ್ತು?'' ಎಂದು ಪ್ರಶ್ನಿಸಿದರು.

ಸ್ವತಃ ದನದ ಸಾವಿಗೆ ಕಾರಣರಾಗಿದ್ದರೂ ತಮ್ಮ ತಪ್ಪು ಮುಚ್ಚಿಹಾಕಲು ಹಾಗೂ ತಮ್ಮ ವ್ಯವಹಾರಕ್ಕೆ ಧಕ್ಕೆ ತರಲು ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ ಜನರಲ್ಲಿ ತಪ್ಪು ಕಲ್ಪನೆ ಮೂಡಿಸಲಾಗುತ್ತಿದೆ ಎಂದು ಆರೋಪಿಸಿದ ಅವರು, ವೈರಲ್ ವಿಡಿಯೋವನ್ನು ಸಾಕ್ಷ್ಯವಾಗಿ ಪರಿಗಣಿಸಿ ತಮ್ಮ ವಿರುದ್ಧ ಮಾನಹಾನಿ ಮಾಡಿರುವ, ಮೂಕ ಪ್ರಾಣಿಯ ಸಾವಿಗೆ ಕಾರಣರಾಗಿರುವ ಹಾಗೂ ತಾಲೂಕಿನಲ್ಲಿ ಕೋಮು ಸೌಹಾರ್ದತೆಗೆ ಧಕ್ಕೆ ತರುವ ಪ್ರಯತ್ನ ನಡೆಸಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ದಲಿತ ಮುಖಂಡ ಹೆನ್ನಲಿ ಶಾಂತರಾಜ್, ಕಾಂಗ್ರೆಸ್ ಮುಖಂಡ ಹಸೆನಾರ್ ಆನೆಮಹಾಲ್ ಹಾಗೂ ಕಾಫಿ ತೋಟದ ಮಾಲೀಕ ಅಯಾಜ್ ಉಪಸ್ಥಿತರಿದ್ದರು.

# ಬಸವರಾಜ ದೇಶಿಕೇಂದ್ರ ಸ್ವಾಮೀಜಿ ಅವರ ಸಂಸ್ಮರಣಿ ಕಾರ್ಯಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು : ಸಾವಿರಾರು ವರ್ಷದ ಇತಿಹಾಸ ಹೊಂದಿರುವ ಪುಷ್ಪಗಿರಿ ಮಠ ಹೊಯ್ಸಳರ ಕಾಲದಲ್ಲಿ ನಿರ್ಮಾಣವಾಗಿದೆ. ಹೊಯ್ಸಳ ರಾಜರಿಗೆ ಪುಷ್ಪಗಿರಿ ಮಠದ ಸ್ವಾಮೀಜಿಗಳು ಮಾರ್ಗದರ್ಶಕರಾಗಿದ್ದರು ಎಂದು ಪುಷ್ಪಗಿರಿ ಮಠದ ಸೋಮಶೇಖರ ಸ್ವಾಮೀಜಿ ಹೇಳಿದರು.

ಪುಷ್ಪಗಿರಿಯಲ್ಲಿ ನಡೆದ ಲಿಂಗೈಕ್ಯ ಬಸವರಾಜ ದೇಶಿಕೇಂದ್ರ ಸ್ವಾಮೀಜಿ ಅವರ ಸಂಸ್ಮರಣಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುಷ್ಪಗಿರಿ ಬೆಟ್ಟದಲ್ಲಿದ್ದ ಮಠ ಕಾರಣಾಂತರದಿಂದ ಚಿಲ್ಕೂರಿಗೆ ಸ್ಥಳಾಂತರವಾಗಿತ್ತು. ಚಿಲ್ಕೂರು ಗ್ರಾಮದಲ್ಲಿ ಲಿಂಗೈಕ್ಯ ಸ್ವಾಮೀಜಿಗಳ 6 ಗದ್ದುಗೆ ಕಾಣಬಹುದು. ಪುಷ್ಪಗಿರಿಯಲ್ಲಿ ಬಸವರಾಜ ದೇಶಿಕೇಂದ್ರ ಸ್ವಾಮೀಜಿ ಗದ್ದುಗೆ ನಿರ್ಮಿಸಲಾಗಿದೆ.

ಸಮಾಜ ಹಾಗೂ ಭಕ್ತರು ಕೈ ಜೋಡಿಸಿದರೆ ಮಾತ್ರ ಧಾರ್ಮಿಕ ಕ್ಷೇತ್ರ ಬೆಳೆಸಲು ಸಾಧ್ಯ. ಪುಷ್ಪಗಿರಿ ಮಠ ಭಕ್ತರ ಸಹಕಾರದಿಂದ ಬೆಳೆಯುತ್ತಿದೆ. ಭಕ್ತರು ಮಠ ಬೆಳೆಯುತ್ತಿರುವುದರಿಂದ ಹೊಯ್ಸಳರ ನಾಡಿನಲ್ಲಿ ರಾಜ್ ವೈಭವ ಮರುಕಳಿಸಿದೆ. ಹೊಯ್ಸಳ ರಾಜರು ನಡೆದಾಡಿದ ಪುಣ್ಯ ಭೂಮಿಯಲ್ಲಿ ಮಠದ ಸ್ವಾಮೀಜಿ ಹಾಗೂ ಸಮಾಜದ ಸೇವೆ ಮಾಡುವ ಅವಕಾಶ ದೊರಕಿರುವುದು ನಮ್ಮ ಪುಣ್ಯ ಎಂದರು. ಆದಿಚುಂಚನಗಿರಿ ಮಠದ ಡಾ.ನಿರ್ಮಲಾನಂದ ಸ್ವಾಮೀಜಿ ಮಾತನಾಡಿ, ಆರೋಗ್ಯ ಸಮಸ್ಯೆ ಮುಚ್ಚಿಟ್ಟರೆ, ದೊಡ್ಡ ಸಮಸ್ಯೆ ಎದುರಾಗುವ ಸಾಧ್ಯತೆ ಇರುತ್ತದೆ ಎಂದರು.

# ಮಾಸಿಕ 36 ಸಾವಿರ ರೂ. ಕನಿಷ್ಠ ವೇತನ ನಿಗದಿಗೆ ಆಗ್ರಹಿಸಿ ಸಿಐಟಿಯು ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ : ರಾಜ್ಯದಲ್ಲಿನ ಎಲ್ಲಾ ಕಾರ್ಮಿಕರಿಗೆ ಜೀವನ ನಿರ್ವಹಣೆಗೆ ಅಗತ್ಯವಾದ ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ ಮಾಸಿಕ ಸರಾಸರಿ 36 ಸಾವಿರ ರೂ. ಕನಿಷ್ಠ ವೇತನ ನಿಗದಿಪಡಿಸಬೇಕು, ಕೇಂದ್ರ ಸರ್ಕಾರ ಜಾರಿಗೊಳಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳಿಗೆ ಕಾರ್ಮಿಕರ ಪರವಾದ ತಿದ್ದುಪಡಿಗಳನ್ನು ಕರ್ನಾಟಕ ಸರ್ಕಾರ ತರಬೇಕು ಹಾಗೂ ಗುತ್ತಿಗೆ, ಹಂಗಾಮಿ ಮತ್ತು ಇತರ ಖಾಯಂಯೇತರ ಕಾರ್ಮಿಕರನ್ನು ಖಾಯಂಗೊಳಿಸಲು ಪ್ರತ್ಯೇಕ ಶಾಸನ ರೂಪಿಸಬೇಕು ಎಂದು ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು) ರಾಜ್ಯ ಸರ್ಕಾರವನ್ನು ಆಗ್ರಹಿಸಿ ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಮಾತನಾಡಿ, ರಾಜ್ಯಾದ್ಯಂತ ಹಮ್ಮಿಕೊಂಡಿರುವ ಪ್ರತಿಭಟನಾ ಕಾರ್ಯಕ್ರಮದ ಭಾಗವಾಗಿ ಈ ಮನವಿ ಸಲ್ಲಿಸಲಾಗಿದ್ದು, ಕಾರ್ಮಿಕರ ಹಕ್ಕುಗಳ ರಕ್ಷಣೆ ಮತ್ತು ಜೀವನಮಟ್ಟ ಸುಧಾರಣೆಗೆ ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ. ರಾಜ್ಯ ಸರ್ಕಾರ ಇತ್ತೀಚೆಗೆ ಕನಿಷ್ಠ ವೇತನವನ್ನು ಪರಿಷ್ಕರಿಸಿ ಅಂತಿಮ ಅಧಿಸೂಚನೆ ಹೊರಡಿಸಿರುವುದು ಸ್ವಾಗತಾರ್ಹ ಕ್ರಮವಾಗಿದೆ. ವಿವಿಧ ಉದ್ದಿಮೆಗಳಿಗೆ ಪ್ರತ್ಯೇಕವಾಗಿ ವೇತನ ನಿಗದಿಪಡಿಸುವ ಬದಲು ಬಹುತೇಕ ಉದ್ದಿಮೆಗಳಿಗೆ ಏಕರೂಪದ ವೇತನ ವ್ಯವಸ್ಥೆ ಜಾರಿಗೊಳಿಸಿರುವುದು ಹಾಗೂ ಹಿಂದಿನ ನಾಲ್ಕು ವಲಯಗಳ ಬದಲಿಗೆ ಮೂರು ವಲಯಗಳ ವ್ಯವಸ್ಥೆ ಅಳವಡಿಸಿರುವುದು ಕಾರ್ಮಿಕರ ಪರವಾದ ಹೆಜ್ಜೆಯಾಗಿದೆ ಎಂದು ಸಿಐಟಿಯು ಅಭಿಪ್ರಾಯಪಟ್ಟಿದೆ ಎಂದರು. ಆದಾಗ್ಯೂ, ಪ್ರಸ್ತುತ ನಿಗದಿಪಡಿಸಿರುವ ವೇತನವು ಕಾರ್ಮಿಕರ ನೈಜ ಜೀವನ ನಿರ್ವಹಣಾ ವೆಚ್ಚಕ್ಕೆ ಪೂರಕವಾಗಿಲ್ಲ ಎಂದು ಸಂಘಟನೆ ಹೇಳಿದೆ. ಸುಪ್ರೀಂ ಕೋರ್ಟ್ 1992ರ 'ವರ್ಕ್‌ಮೆನ್ ವರ್ಸಸ್ ರೆಪ್ಟಾಕೋಸ್ ಬ್ರೆಟ್ ಅಂಡ್ ಕಂಪನಿ' ಪ್ರಕರಣದಲ್ಲಿ ನಿಗದಿಪಡಿಸಿರುವ ಮಾನದಂಡಗಳ ಪ್ರಕಾರ ಕಾರ್ಮಿಕ ಮತ್ತು ಅವರ ಕುಟುಂಬದ ಜೀವನ ನಿರ್ವಹಣೆಗೆ ಅಗತ್ಯವಿರುವ ಆಹಾರ, ವಸತಿ, ಶಿಕ್ಷಣ, ಆರೋಗ್ಯ, ಸಾರಿಗೆ ಹಾಗೂ ಇತರೆ ಮೂಲಭೂತ ಅಗತ್ಯಗಳನ್ನು ಪರಿಗಣಿಸಿ ವೇತನ ನಿಗದಿಪಡಿಸಬೇಕಾಗಿದೆ. ಇದೇ ಮಾನದಂಡಗಳನ್ನು ಆಧರಿಸಿ ರಾಜ್ಯದಲ್ಲಿ ಕನಿಷ್ಠ ವೇತನ ಪರಿಷ್ಕರಿಸಬೇಕೆಂದು ಕರ್ನಾಟಕ ಹೈಕೋರ್ಟ್ ಕೂಡ ನಿರ್ದೇಶನ ನೀಡಿತ್ತು. ಆದರೆ ಸರ್ಕಾರದ ಇತ್ತೀಚಿನ ಅಧಿಸೂಚನೆ ಈ ಮಾನದಂಡಗಳಿಗೆ ಸಂಪೂರ್ಣವಾಗಿ ಅನುಗುಣವಾಗಿಲ್ಲ ಎಂದು ಆರೋಪಿಸಿದರು.

ಪ್ರಸ್ತುತ ಮಾರುಕಟ್ಟೆಯಲ್ಲಿನ ಬೆಲೆ ಏರಿಕೆ, ದಿನನಿತ್ಯದ ಜೀವನ ವೆಚ್ಚ ಮತ್ತು ಕುಟುಂಬ ನಿರ್ವಹಣೆಯ ವಾಸ್ತವಿಕ ಅಗತ್ಯಗಳನ್ನು ಪರಿಗಣಿಸಿದರೆ ಕನಿಷ್ಠ ವೇತನವು ಸರಾಸರಿ 36 ಸಾವಿರ ರೂ. ಇರಬೇಕು. ರಾಜ್ಯದಲ್ಲಿ ಒಂದು ಕೋಟಿಗೂ ಅಧಿಕ ಕಾರ್ಮಿಕರಿಗೆ ಪರಿಷ್ಕೃತ ವೇತನದಿಂದ ಪ್ರಯೋಜನವಾಗಲಿದೆಯಾದರೂ, ನೈಜ ಜೀವನ ವೆಚ್ಚಕ್ಕೆ ತಕ್ಕಂತೆ ಮತ್ತಷ್ಟು ಹೆಚ್ಚಳ ಅಗತ್ಯವಿದೆ ಎಂದು ಹೇಳಿದರು..

ಇನ್ನೊಂದು ಪ್ರಮುಖ ವಿಚಾರವಾಗಿ, ಕನಿಷ್ಠ ವೇತನ ಪರಿಷ್ಕರಣೆಯ ಜಾರಿಯ ದಿನಾಂಕದ ಕುರಿತು ಸಿಐಟಿಯು ಆಕ್ಷೇಪ ವ್ಯಕ್ತಪಡಿಸಿದೆ. ಸರ್ಕಾರ ಕರಡು ಅಧಿಸೂಚನೆಯನ್ನು 2025ರ ಏಪ್ರಿಲ್ 11ರಂದು ಪ್ರಕಟಿಸಿದ್ದರೂ, ಅಂತಿಮ ಅಧಿಸೂಚನೆಯನ್ನು 2026ರ ಮೇ 22ರಿಂದ ಜಾರಿಗೆ ತಂದಿದೆ. ಇದರಿಂದ ಕಾರ್ಮಿಕರು ಸುಮಾರು ಒಂದು ವರ್ಷದ ಅವಧಿಯ ಬಾಕಿ ವೇತನದಿಂದ ವಂಚಿತರಾಗಿದ್ದಾರೆ. ಆದ್ದರಿಂದ ಪರಿಷ್ಕೃತ ವೇತನವನ್ನು 2025ರ ಏಪ್ರಿಲ್ 11ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ತಂದು ಕಾರ್ಮಿಕರಿಗೆ ದೊರೆಯಬೇಕಾದ ವೇತನ ಬಾಕಿಯನ್ನು ಪಾವತಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಪರಿಷ್ಕೃತ ವೇತನ ಅಧಿಸೂಚನೆಯಿಂದ ಗಾರ್ಮೆಂಟ್ಸ್, ಪ್ಲಾಂಟೇಷನ್, ಬೀಡಿ, ಅಗರಬತ್ತಿ, ಕೈಮಗ್ಗ ಸೇರಿದಂತೆ 19 ಪ್ರಮುಖ ಉದ್ದಿಮೆಗಳನ್ನು ಹೊರಗಿಟ್ಟಿರುವ ಕ್ರಮವನ್ನೂ ಸಿಐಟಿಯು ತೀವ್ರವಾಗಿ ವಿರೋಧಿಸಿದೆ. ಈ ಕ್ಷೇತ್ರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಕಾರ್ಮಿಕರು ಕೆಲಸ ಮಾಡುತ್ತಿದ್ದು, ಅವರು ವೇತನ ಹೆಚ್ಚಳದ ಲಾಭದಿಂದ ವಂಚಿತರಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಪ್ರಸ್ತುತ ಜಾರಿಗೊಳಿಸಿರುವ ಕನಿಷ್ಠ ವೇತನವನ್ನು ಈ ಎಲ್ಲಾ ಉದ್ದಿಮೆಗಳಿಗೂ ವಿಸ್ತರಿಸಿ ಹೊಸ ಅಧಿಸೂಚನೆ ಹೊರಡಿಸಬೇಕು ಎಂದು ಒತ್ತಾಯಿಸಿದುರ. ಸರ್ಕಾರ ಪರಿಷ್ಕೃತ ವೇತನ ಪ್ರಕಟಿಸಿರುವುದು ಮಾತ್ರ ಸಾಕಾಗುವುದಿಲ್ಲ. ಅನೇಕ ಕಡೆಗಳಲ್ಲಿ ಮಾಲೀಕರು ಕನಿಷ್ಠ ವೇತನ ಪಾವತಿಸುವುದನ್ನು ತಪ್ಪಿಸಲು ಪ್ರಯತ್ನಿಸುತ್ತಿರುವುದರಿಂದ, ಯಾವುದೇ ಒತ್ತಡಕ್ಕೆ ಮಣಿಯದೆ ಕಾರ್ಮಿಕ ಇಲಾಖೆಯ ಮೂಲಕ ಕಟ್ಟುನಿಟ್ಟಿನ ಅನುಷ್ಠಾನ ಕ್ರಮ ಕೈಗೊಳ್ಳಬೇಕು. ನಿಯಮ ಉಲ್ಲಂಘಿಸುವ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಿ ಕಾರ್ಮಿಕರಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಆಗ್ರಹಿಸಿದರು. ಕೇಂದ್ರ ಸರ್ಕಾರ 29 ಕಾರ್ಮಿಕ ಕಾನೂನುಗಳನ್ನು ರದ್ದುಪಡಿಸಿ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಜಾರಿಗೆ ತಂದಿರುವುದರ ಬಗ್ಗೆಯೂ ಸಂಘಟನೆ ತೀವ್ರ ಆತಂಕ ವ್ಯಕ್ತಪಡಿಸಿದೆ. ಈ ಸಂಹಿತೆಗಳು ಕಾರ್ಮಿಕರು ಸ್ವಾತಂತ್ರ್ಯಪೂರ್ವ ಕಾಲದಿಂದಲೂ ಹೋರಾಟಗಳ ಮೂಲಕ ಪಡೆದಿರುವ ಅನೇಕ ಹಕ್ಕುಗಳನ್ನು ದುರ್ಬಲಗೊಳಿಸುವ ಸಾಧ್ಯತೆ ಇದೆ. ಕೆಲಸದ ಭದ್ರತೆ ಕಡಿಮೆಯಾಗುವುದು, ಕಾರ್ಮಿಕ ಸಂಘಟನೆಗಳ ಹಕ್ಕುಗಳಿಗೆ ಧಕ್ಕೆಯಾಗುವುದು ಹಾಗೂ ಶ್ರಮದ ಶೋಷಣೆ ಹೆಚ್ಚಾಗುವ ಅಪಾಯವಿದೆ ಎಂದು ಅಭಿಪ್ರಾಯಪಟ್ಟರು. ಹೀಗಾಗಿ ಕೇಂದ್ರದ ಸಂಹಿತೆಗಳನ್ನು ಯಥಾವತ್ತಾಗಿ ಜಾರಿಗೊಳಿಸದೆ, ರಾಜ್ಯ ಸರ್ಕಾರ ಸಂವಿಧಾನ ನೀಡಿರುವ ಅಧಿಕಾರ ಬಳಸಿಕೊಂಡು ಕಾರ್ಮಿಕರ ಹಿತಾಸಕ್ತಿಯನ್ನು ರಕ್ಷಿಸುವ ರೀತಿಯಲ್ಲಿ ಕರ್ನಾಟಕಕ್ಕೆ ಪ್ರತ್ಯೇಕ ತಿದ್ದುಪಡಿಗಳನ್ನು ತರಬೇಕು. ನಂತರವೇ ರಾಜ್ಯ ನಿಯಮಗಳನ್ನು ರೂಪಿಸಿ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು. ಸರ್ಕಾರಿ ಹಾಗೂ ಖಾಸಗಿ ವಲಯಗಳಲ್ಲಿ ಲಕ್ಷಾಂತರ ಕಾರ್ಮಿಕರು ಗುತ್ತಿಗೆ, ಹಂಗಾಮಿ, ಔಟ್‌ಸೋರ್ಸಿಂಗ್, ನಿಯಮಿತ ಅವಧಿ, ತರಬೇತಿ ಸೇರಿದಂತೆ ವಿವಿಧ ಸ್ವರೂಪಗಳಲ್ಲಿ ಕೆಲಸ ಮಾಡುತ್ತಿದ್ದಾರೆ.

ಇವರಿಗೆ ಖಾಯಂ ನೌಕರರಿಗೆ ದೊರೆಯುವ ವೇತನ, ಭತ್ಯೆ, ಸಾಮಾಜಿಕ ಭದ್ರತೆ ಹಾಗೂ ಕಾನೂನುಬದ್ಧ ಸೌಲಭ್ಯಗಳು ದೊರೆಯುತ್ತಿಲ್ಲ. ವರ್ಷಗಳ ಕಾಲ ಒಂದೇ ಸಂಸ್ಥೆಯಲ್ಲಿ ದುಡಿಯುತ್ತಿದ್ದರೂ ಉದ್ಯೋಗ ಭದ್ರತೆ ಇಲ್ಲದ ಸ್ಥಿತಿಯಲ್ಲಿ ಬದುಕು ಸಾಗಿಸುತ್ತಿದ್ದಾರೆ ಎಂದು ಮನವಿ ಪತ್ರದಲ್ಲಿ ವಿವರಿಸಲಾಗಿದೆ ಎಂದರು. ಈ ಹಿನ್ನೆಲೆಯಲ್ಲಿ ಗುತ್ತಿಗೆ ಪದ್ಧತಿಯನ್ನು ನಿಯಂತ್ರಿಸುವ ಹಾಗೂ ಖಾಯಂಯೇತರ ಕಾರ್ಮಿಕರನ್ನು ಖಾಯಂಗೊಳಿಸುವ ಪ್ರತ್ಯೇಕ ಕಾನೂನು ರೂಪಿಸಬೇಕು. ಈ ಹಿಂದೆ ಕಾರ್ಮಿಕ ಇಲಾಖೆ ಈ ಸಂಬಂಧ ಕರಡು ಮಸೂದೆ ಸಿದ್ಧಪಡಿಸಿದ್ದರೂ ಅದು ಜಾರಿಗೆ ಬಂದಿಲ್ಲ. ಪ್ರಸ್ತುತ ಜಾರಿಯಲ್ಲಿರುವ ಸೊಸೈಟಿ ಮಾದರಿಯ ವ್ಯವಸ್ಥೆಯನ್ನು ಕೈಬಿಟ್ಟು ಕಾರ್ಮಿಕರಿಗೆ ನೇರ ಉದ್ಯೋಗ ಭದ್ರತೆ ಒದಗಿಸುವ ಶಾಸನ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಬಿ. ಪುಷ್ಪ, ಖಜಾಂಚಿ ಅರವಿಂದ, ಪ್ರಧಾನ ಕಾರ್ಯದರ್ಶಿ ಮಂಜುಳ, ಕೆ.ಟಿ. ಹೊನ್ನೇಗೌಡ, ಸೌಮ್ಯ ಸೇರಿದಂತೆ ವಿವಿಧ ಕಾರ್ಮಿಕ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು

## ಸಮಾಜಕಾರ್ಯ ವಿಭಾಗದ ಗ್ರಾಮೀಣ ಶಿಬಿರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಹಾಸನ ವಿಶ್ವವಿದ್ಯಾಲಯದ ಹೇಮಗಂಗೋತ್ರಿ ಆವರಣದ ಸಮಾಜಕಾರ್ಯ (ಎಂಎಸ್‌ಡಬ್ಲ್ಯು) ವಿಭಾಗದ ವಿದ್ಯಾರ್ಥಿಗಳು ಗ್ರಾಮೀಣ ಶಿಬಿರದ ಅಂಗವಾಗಿ ಹಾಸನ ತಾಲ್ಲೂಕಿನ ಸಿ.ಹೊಸೂರು ಗ್ರಾಮದಲ್ಲಿ ಒಂದು ದಿನದ ಪಾಲ್ಗೊಳ್ಳುವ ಗ್ರಾಮೀಣ ಮೌಲ್ಯಮಾಪನ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿದರು.

ಗ್ರಾಮಸ್ಥರ ಸಕ್ರಿಯ ಭಾಗವಹಿಸುವಿಕೆಯೊಂದಿಗೆ ಗ್ರಾಮದ ಸಂಪನ್ಮೂಲಗಳು, ಸಮಸ್ಯೆಗಳು ಹಾಗೂ ಅಭಿವೃದ್ಧಿ ಅಗತ್ಯತೆಗಳನ್ನು ಗುರುತಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು. ಗ್ರಾಮೀಣ ಅಭಿವೃದ್ಧಿಯಲ್ಲಿ ಜನರ ಪಾಲ್ಗೊಳ್ಳುವಿಕೆಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವುದರ ಜೊತೆಗೆ, ಸಮುದಾಯದೊಂದಿಗೆ ನೇರವಾಗಿ ಬೆರೆತು ಕಾರ್ಯನಿರ್ವಹಿಸುವ ಪ್ರಾಯೋಗಿಕ ಅನುಭವವನ್ನು ಕಲ್ಪಿಸುವುದು ಶಿಬಿರದ ಮುಖ್ಯ ಉದ್ದೇಶವಾಗಿತ್ತು. ಕಾರ್ಯಕ್ರಮದ ವೇಳೆ ಸಮಾಜಕಾರ್ಯ ವಿಭಾಗದ ವಿದ್ಯಾರ್ಥಿಗಳು ಸಾಮಾಜಿಕ ನಕ್ಷೆ, ಸಂಪನ್ಮೂಲ ನಕ್ಷೆ, ಗ್ರಾಮ ಸಮೀಕ್ಷೆ, ಟ್ರಾನ್ಸೆಕ್ಟ್ ವಾಕ್, ಸಮುದಾಯ ಸಂವಾದ ಸೇರಿದಂತೆ ವಿವಿಧ Pಖಂ ಚಟುವಟಿಕೆಗಳನ್ನು ನಡೆಸಿದರು. ಈ ಮೂಲಕ ಗ್ರಾಮದ ಸಾಮಾಜಿಕ, ಆರ್ಥಿಕ ಹಾಗೂ ಪರಿಸರ ಸಂಬಂಧಿತ ಅಂಶಗಳ ಕುರಿತು ಸಮಗ್ರ ಮಾಹಿತಿ ಸಂಗ್ರಹಿಸಲಾಯಿತು. ಗ್ರಾಮದಲ್ಲಿರುವ ಮೂಲಸೌಕರ್ಯಗಳು, ಕುಡಿಯುವ ನೀರು, ರಸ್ತೆ, ಶಿಕ್ಷಣ, ಆರೋಗ್ಯ ಮತ್ತು ಉದ್ಯೋಗದಂತಹ ವಿವಿಧ ವಿಷಯಗಳ ಕುರಿತು ಗ್ರಾಮಸ್ಥರೊಂದಿಗೆ ಸಂವಾದ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಂಪನ್ಮೂಲ ವ್ಯಕ್ತಿಗಳು Pಖಂ ಪರಿಕಲ್ಪನೆಯ ಮಹತ್ವ, ಗ್ರಾಮೀಣ ಅಭಿವೃದ್ಧಿಯಲ್ಲಿ ಜನರ ಭಾಗವಹಿಸುವಿಕೆಯ ಅಗತ್ಯತೆ ಹಾಗೂ ಸಮಾಜಕಾರ್ಯದ ಪಾತ್ರದ ಕುರಿತು ಉಪನ್ಯಾಸ ನೀಡಿದರು. ಅಭಿವೃದ್ಧಿ ಕಾರ್ಯಗಳು ಯಶಸ್ವಿಯಾಗಬೇಕಾದರೆ ಸ್ಥಳೀಯ ಜನರ ಸಹಕಾರ ಮತ್ತು ಪಾಲ್ಗೊಳ್ಳುವಿಕೆ ಅತ್ಯಗತ್ಯ ಎಂದು ಅವರು ತಿಳಿಸಿದರು. ಸಮಾಜಕಾರ್ಯ ವಿದ್ಯಾರ್ಥಿಗಳು ಗ್ರಾಮ ಸಮುದಾಯದೊಂದಿಗೆ ನಿಕಟ ಸಂಪರ್ಕ ಹೊಂದಿ ಅವರ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕೆಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮಸ್ಥರು, ಯುವಕರು, ಮಹಿಳಾ ಸಂಘಗಳ ಸದಸ್ಯರು ಹಾಗೂ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದರು. ಗ್ರಾಮದ ಪ್ರಮುಖ ಸಮಸ್ಯೆಗಳು, ಲಭ್ಯವಿರುವ ಸಂಪನ್ಮೂಲಗಳು ಹಾಗೂ ಭವಿಷ್ಯದ ಅಭಿವೃದ್ಧಿ ಸಾಧ್ಯತೆಗಳ ಕುರಿತು ಚರ್ಚೆ ನಡೆಯಿತು. ಗ್ರಾಮಾಭಿವೃದ್ಧಿಗೆ ಸಮುದಾಯದ ಸಹಭಾಗಿತ್ವ ಅಗತ್ಯ ಎಂಬ ಸಂದೇಶವನ್ನು ಕಾರ್ಯಕ್ರಮದ ಮೂಲಕ ನೀಡಲಾಯಿತು.

## ಅನ್ನ ದಾಸೋಹ ಶತದಿನೋತ್ಸವ ಜೂ.1ರಂದು ಸಮಾರಂಭ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಕಳೆದ ನೂರು ದಿನಗಳಿಂದ ನಿರಂತರವಾಗಿ ನಡೆಸಿಕೊಂಡು ಬರುತ್ತಿರುವ ''ಅನ್ನ ದಾಸೋಹ'' ಕಾರ್ಯಕ್ರಮವು ಯಶಸ್ವಿಯಾಗಿ ಶತದಿನೋತ್ಸವವನ್ನು ತಲುಪಿರುವ ಹಿನ್ನೆಲೆಯಲ್ಲಿ ವಿಶೇಷ ಸಮಾರಂಭವನ್ನು ಜೂನ್ 1ರ ಸೋಮವಾರದಂದು ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದು, ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಕೆನರಾ ಗಿಗ್ ಸ್ಟಾರ್ ಯೋಜನೆಗೆ ಚಾಲನೆ ಸಿಗಲಿದೆ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ನಂಜುಂಡೇಗೌಡ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಮಾಹಿತಿ ನೀಡಿದ ಅವರು, ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರ ಕುಟುಂಬಗಳೊಂದಿಗೆ ಬೆಸೆಯುವ ನಿಟ್ಟಿನಲ್ಲಿ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಾಗುತ್ತಿದೆ. ಶೈಕ್ಷಣಿಕ, ಕ್ರೀಡಾ, ಸಾಂಸ್ಕೃತಿಕ ಹಾಗೂ ಇತರೆ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿರುವ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸುವ ಮೂಲಕ ಅವರ ಸಾಧನೆಯನ್ನು ಗೌರವಿಸಲಾಗುವುದು. ಈ ಮೂಲಕ ವಿದ್ಯಾರ್ಥಿಗಳಲ್ಲಿ ಇನ್ನಷ್ಟು ಸಾಧನೆ ಮಾಡುವ ಉತ್ಸಾಹವನ್ನು ತುಂಬುವ ಪ್ರಯತ್ನ ಸಂಘದಿಂದ ಮಾಡಲಾಗುತ್ತಿದೆ ಎಂದರು. ಕಾರ್ಯಕ್ರಮವನ್ನು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಹಾಸನ ಮತ್ತು ಕೊಡಗು ಶಾಖೆಯ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಶಂಭುನಾಥ ಸ್ವಾಮೀಜಿ ಉದ್ಘಾಟಿಸಲಿದ್ದಾರೆ. ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ ಅವರು ಅಧ್ಯಕ್ಷತೆ ವಹಿಸಲಿದ್ದು, ಸಂಘದ ವಿವಿಧ ಸಮಾಜಮುಖಿ ಚಟುವಟಿಕೆಗಳ ಕುರಿತು ಮಾತನಾಡಲಿದ್ದಾರೆ. ಜಿಲ್ಲಾಧಿಕಾರಿ ಶ್ರೀಮತಿ ಕೆ.ಎಸ್. ಲತಾಕುಮಾರಿ ಅವರು ಸಾಧಕ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಲಿದ್ದಾರೆ. ಜಿಲ್ಲೆಯ ಆಡಳಿತ ಮುಖ್ಯಸ್ಥರ ಸಮ್ಮುಖದಲ್ಲಿ ವಿದ್ಯಾರ್ಥಿಗಳಿಗೆ ಸನ್ಮಾನ ನಡೆಯುತ್ತಿರುವುದು ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿದೆ. ಇದೇ ಸಂದರ್ಭದಲ್ಲಿ ಪತ್ರಕರ್ತರ ಆರ್ಥಿಕ ಸಬಲೀಕರಣ ಹಾಗೂ ಸ್ವಾವಲಂಬನೆಗೆ ನೆರವಾಗುವ ಉದ್ದೇಶದಿಂದ ಕೆನರಾ ಬ್ಯಾಂಕ್‌ನ ''ಕೆನರಾ ಗಿಗ್ ಸ್ಟಾರ್'' ಯೋಜನೆಗೆ ಚಾಲನೆ ನೀಡಲಾಗುತ್ತಿದೆ. ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಶ್ರೀಮತಿ ಲತಾ ಸರಸ್ವತಿ ಅವರು ಯೋಜನೆಯನ್ನು ಉದ್ಘಾಟಿಸಿ, ಅದರ ಸೌಲಭ್ಯಗಳು ಹಾಗೂ ಪತ್ರಕರ್ತರಿಗೆ ದೊರೆಯುವ ಪ್ರಯೋಜನಗಳ ಕುರಿತು ಮಾಹಿತಿ ನೀಡಲಿದ್ದಾರೆ. ದಿಕ್ಸೂಚಿ ನುಡಿಯನ್ನು ಕರ್ನಾಟಕ ರಾಜ್ಯ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ. ಮದನ್ ಗೌಡ ನಡೆಸಿಕೊಡುವರು ಎಂದು ಹೇಳಿದರು.

ಜಿಲ್ಲಾ ಪತ್ರಕರ್ತರ ಸಂಘದ ಕಾರ್ಯದರ್ಶಿ ಕೆ.ಎಂ. ಹರೀಶ್ ಮಾತನಾಡಿ, ಈ ಸೇವಾ ಕಾರ್ಯಕ್ರಮವನ್ನು ಯಶಸ್ವಿಗಳಿಸಲು ಜಿಲ್ಲೆಯ ಎಲ್ಲಾ ತಾಲೂಕಿನ ಪತ್ರಕರ್ತರ ಆಗಮಿಸಬೇಕೆಂದು ಕೋರಿದರು.ಈ ಸಮಾರಂಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಸಮಿತಿ ಸದಸ್ಯ ಕೆ.ಪಿ.ಎಸ್. ಪ್ರಮೋದ್, ಪ್ರಧಾನ ಕಾರ್ಯದರ್ಶಿ ಕೆ.ಜಿ. ಸುರೇಶ್ ಹಾಗೂ ರಾಜ್ಯ ಸಂಘದ ಖಜಾಂಚಿ ಪ್ರಕಾಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಜೊತೆಗೆ ಸಂಘದ ಉಪಾಧ್ಯಕ್ಷರಾದ ಎನ್. ನಂಜುಂಡೇಗೌಡ, ಜಿ. ಪ್ರಕಾಶ್, ಮೋಹನ್ ಕುಮಾರ್, ಕಾರ್ಯದರ್ಶಿಗಳಾದ ಕೆ.ಎಂ. ಹರೀಶ್, ಖುಷ್ವಂತ್, ಬಿ.ಆರ್. ಬೊಮ್ಮೇಗೌಡ ಸೇರಿದಂತೆ ಜಿಲ್ಲಾ ಸಂಘದ ಎಲ್ಲಾ ನಿರ್ದೇಶಕರು ಮತ್ತು ಸದಸ್ಯರು ಉಪಸ್ಥಿತರಿರಲಿದ್ದಾರೆ.

# ವಿವೇಕೋಪಾಸನೆಯಿಂದ ಉತ್ಕೃಷ್ಟ ಭವಿಷ್ಯ ನಿರ್ಮಾಣ ಸಾಧ್ಯ

### ಸ್ವಾಮಿ ವೀರೇಶಾನಂದ ಸರಸ್ವತೀ | ಬಡ ವಿದ್ಯಾರ್ಥಿಗಳಿಗೆ ಬೆಳಕಾದ 'ಚಂದ್ರಲೇಖ ಸುಬ್ರಹ್ಮಣ್ಯ ಟ್ರಸ್ಟ್'

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ನಾವು ಕೇವಲ ಅನ್ನದ ಮಟ್ಟದ ಅಗತ್ಯ ಪೂರೈಕೆಯಲ್ಲೇ ತೃಪ್ತಿಪಡಬಾರದು, ವಿವೇಕವನ್ನು ಉಪಾಸನೆ ಮಾಡಿದರೆ ಮಾತ್ರ ಮನುಷ್ಯನಿಗೆ ಉತ್ಕೃಷ್ಟ ಭವಿಷ್ಯ ದೊರೆಯುತ್ತದೆ ಎಂದು ತುಮಕೂರು ಶ್ರೀ ರಾಮಕೃಷ್ಣ-ವಿವೇಕಾನಂದ ಆಶ್ರಮದ ಅಧ್ಯಕ್ಷ ಶ್ರೀ ಸ್ವಾಮಿ ವೀರೇಶಾನಂದ ಸರಸ್ವತೀ ಮಹಾರಾಜ್ ನುಡಿದರು.

ನಗರದ ಹೇಮಾವತಿನಗರದ 'ಶ್ರೀ ಗಾಯತ್ರೀ ಭವನ'ದಲ್ಲಿ ಶುಕ್ರವಾರ ಶ್ರೀಮತಿ ಎಂ.ಎನ್. ಚಂದ್ರಲೇಖ ಸುಬ್ರಹ್ಮಣ್ಯ ಚಾರಿಟಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ 'ಛಾತ್ರೋಪಯೋಗೀ ಸಂಕಲ್ಪಿತ 9ನೇ ವಾರ್ಷಿಕ ಆರ್ಥಿಕ ಸಹಾಯ ವಿತರಣೆ' ಸಮಾರಂಭದಲ್ಲಿ ದಿವ್ಯಸಾನ್ನಿಧ್ಯ ವಹಿಸಿ, 'ವಿವೇಕೋಪಾಸನೆಯಿಂದ ಉತ್ಕೃಷ್ಟ ಭವಿಷ್ಯ' ಎಂಬ ವಿಷಯದ ಕುರಿತು ಅವರು ಮಾರ್ಗದರ್ಶನ ಮಾಡಿದರು.

"ಯಾವುದು ಒಳಿತು, ಯಾವುದು ಕೆಡುಕು ಎನ್ನುವುದರ ಪರಾಮರ್ಶೆಯೇ ವಿವೇಕ. ಶಂಕರಾಚಾರ್ಯರು ಹೇಳಿದಂತೆ ಯುಕ್ತಾಯುಕ್ತಾ ವಿವೇಕ ನಮ್ಮಲ್ಲಿರಬೇಕು. ನೀವು ವಿವೇಕದಿಂದ ನಡೆದುಕೊಂಡರೆ ಪ್ರಪಂಚ ಗೌರವಿಸುತ್ತದೆ" ಎಂದು ಕಿವಿಮಾತು ಹೇಳಿದರು.

"ಮೂರ್ಖರಿಗೆ ದೊಡ್ಡ ಪ್ರಮಾಣದ ಅನುಯಾಯಿಗಳ ಪಡೆ ಇದೆ ಎನ್ನುವ ಮಾತಿದೆ. ಮೂರ್ಖರು ಎಷ್ಟು ಸಂಘಟಿತರಾಗುತ್ತಾರೋ ವಿವೇಕವಂತರು ಅಷ್ಟೇ ಸುರಕ್ಷಿತರಾಗುತ್ತಾರೆ. ವಿವೇಕ ಎಂದರೆ ಕೇವಲ ಬುದ್ಧಿಶಕ್ತಿ, ನಾಜೂಕುತನ, ಚಮತ್ಕಾರ ಅಥವಾ ಯಶಸ್ಸಿನ ವೈಭವ ಆಚರಣೆ ಅಲ್ಲ. ನಾನು ಇಷ್ಟಪಟ್ಟಿದ್ದನ್ನು ಯೋಗ್ಯ ರೀತಿಯಲ್ಲಿ ಪಡೆದು ಯೋಗ್ಯತೆಯನ್ನು ಊರ್ಜಿತಗೊಳಿಸಿಕೊಳ್ಳುವುದೇ ನಿಜವಾದ ವಿವೇಕ. ವಿವೇಕವನ್ನು ಕುರಿತು ಧ್ಯಾನಿಸುವುದೇ ಜೀವನದ ಚರಮ ಕರ್ತವ್ಯ. ವಿವೇಕಪೂರ್ಣವಾಗಿ ಯೋಚನೆ ಆರಂಭಿಸಿದಾಗ ಎಲ್ಲ ದೌರ್ಬಲ್ಯಗಳನ್ನು ಕೊಡವಿ ಹಾಕಿ ಮುಂದೆ ಹೋಗಲು ಸಾಧ್ಯ. ಉತ್ತಮ ಹವ್ಯಾಸ ಹಾಗೂ ಅಭ್ಯಾಸಗಳು ನಮ್ಮನ್ನು ತಪ್ಪುಗಳಿಂದ ಮುಕ್ತವಾಗಿ ಮಾಡುತ್ತವೆ" ಎಂದು ಸ್ವಾಮೀಜಿ ವಿವರಿಸಿದರು.

'ಕಲಿತು ಕಲಿಸು, ಪಡೆದು ಕೊಡು' ಎನ್ನುವುದೇ ನನ್ನ ಮಾರ್ಗ: ಹೆಚ್.ಎಸ್. ಸುಬ್ರಹ್ಮಣ್ಯ:

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಚಂದ್ರಲೇಖಾಸುಬ್ರಹ್ಮಣ್ಯ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷ, ನಿವೃತ್ತ ಶಿಕ್ಷಕ ಹೆಚ್.ಎಸ್. ಸುಬ್ರಹ್ಮಣ್ಯ ಅವರು ಮಾತನಾಡಿ, ಟ್ರಸ್ಟ್‌ನ ಸೇವಾ ಕಾರ್ಯಗಳ ಕುರಿತು ಮಾಹಿತಿ ಹಂಚಿಕೊಂಡರು.

"ಸಮಾಜಕ್ಕಾಗಿ ಮಾಡಬೇಕಾದ ಸೇವೆ ಮಾಡಲಾಗಲಿಲ್ಲವಲ್ಲ ಎಂದು ಬಹಳ ನೊಂದಿದ್ದೆ, ಹೀಗಾಗಿ ನನ್ನ ಮನೆ ಮಾರಾಟ ಮಾಡಿ ಬಂದ ಒಂದು ಕೋಟಿ ರೂ. ಹಣವನ್ನು ಟ್ರಸ್ಟ್‌ಗೆ ಹಾಕಿದೆ. ನಾನು ವೃತ್ತಿಯಲ್ಲಿ ಶಿಕ್ಷಕರಾಗಿದ್ದ ನಾನು ಹಾಗೂ ನನ್ನ ಪತ್ನಿ ಚಂದ್ರಲೇಖಾ ಇಬ್ಬರೂ, ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಯನ್ನೂ ಪಡೆದಿದ್ದೆವು.

ಬಡ ಮಕ್ಕಳಿಗೆ ಶಿಕ್ಷಣ ನೀಡಬೇಕು ಎನ್ನುವುದು ನಮ್ಮ ಬಹುದೊಡ್ಡ ಧ್ಯೇಯವಾಗಿತ್ತು. ಅದರಂತೆ ನಮ್ಮ ಶಾಲೆಗೆ ಬರುತ್ತಿದ್ದ ವಿದ್ಯಾರ್ಥಿಗಳಲ್ಲಿ ಬಹುತೇಕರು ಪ್ಲಾಂಟೇಷನ್‌ಗಳಲ್ಲಿ ಕೆಲಸ ಮಾಡುವ ಕೂಲಿ ಕಾರ್ಮಿಕರ ಕುಟುಂಬಗಳ ಮಕ್ಕಳೇ ಆಗಿರುತ್ತಿದ್ದರು.

ನನ್ನ ವೃತ್ತಿ ಜೀವನದಲ್ಲಿ ನಾನು ಪಾಠ ಮಾಡಿದ ಮೂರೂವರೆ ಸಾವಿರ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪಾಸಾಗಿದ್ದಾರೆ.

ಇಂದಿಗೂ ಆ ವಿದ್ಯಾರ್ಥಿಗಳು ನನ್ನ ಸಂಪರ್ಕದಲ್ಲಿದ್ದು, ಶೈಕ್ಷಣಿಕ ಹಾಗೂ ಸಾಂಸ್ಕೃತಿಕವಾಗಿ ಕೈಲಾದ ಸಹಾಯ ಮಾಡುತ್ತಿದ್ದೇವೆ. 'ಕಲಿತು ಕಲಿಸು, ಪಡೆದು ಕೊಡು' ಎನ್ನುವುದು ನನ್ನ ಮಾರ್ಗ" ಎಂದರು.

"ಟ್ರಸ್ಟ್ ಮೂಲಕ ಬಡ ವಿದ್ಯಾರ್ಥಿಗಳಿಗೆ ಕನಿಷ್ಠ ಮೂರು ಲಕ್ಷ ರೂ. ದಾನ ಮಾಡುತ್ತಿದ್ದೇನೆ. ಬಡ ರೋಗಿಗಳಿಗೆ ಆರ್ಥಿಕ ಸಹಾಯ, ಧಾರ್ಮಿಕ-ಸಾಮಾಜಿಕ ಸೇವಾ ಸಂಸ್ಥೆಗಳಿಗೆ ಹಾಗೂ ಗೋಶಾಲೆಗೆ ನೆರವು ನೀಡಲಾಗುತ್ತಿದೆ. ಸ್ನೇಹಿತ ಕೆ.ವಿ.ನಾಗರಾಜ್ ಅವರ ಟ್ರಸ್ಟ್‌ನಿಂದಲೂ 15.60 ಲಕ್ಷ ರೂ. ನೀಡಿದ್ದೇವೆ. ಕಳೆದ ಎಂಟು ವರ್ಷಗಳಲ್ಲಿ ಒಟ್ಟು 35 ಲಕ್ಷ ರೂ. ವೆಚ್ಚ ಮಾಡಿದ್ದೇವೆ. ನೋಟ್ ಪುಸ್ತಕಗಳ ವಿತರಣೆ, ಹೃದ್ರೋಗಿಗೆ ಸಹಾಯಧನ, ಸರ್ಕಾರಿ ಶಾಲೆಗೆ ಲ್ಯಾಪ್‌ಟಾಪ್ ಕೊಡುಗೆ ನೀಡಲಾಗಿದೆ. ಈ ವರ್ಷ ನಾನು ಹತ್ತು ಮಕ್ಕಳಿಗೆ, ಎರಡು ಶಾಲೆ, ಒಂದು ಶಿಶುವಿಹಾರ ಹಾಗೂ ನಿವೇದಿತಾ ಶಾಲೆಗಳಿಗೆ ಆರ್ಥಿಕ ಸಹಾಯ ಮಾಡುತ್ತಿದ್ದೇನೆ" ಎಂದು ತಮ್ಮ ಸೇವಾ ಕೈಂಕರ್ಯವನ್ನು ವಿವರಿಸಿದರು.




ಕಾರ್ಯಕ್ರಮದಲ್ಲಿ ಆಯ್ದ ವಿದ್ಯಾರ್ಥಿಗಳಿಗೆ ಹಾಗೂ ಸಂಸ್ಥೆಗಳಿಗೆ 'ಸಂಕಲ್ಪಿತ ಸೇವಾಫಲ' (ಆರ್ಥಿಕ ಸಹಾಯ) ಪ್ರದಾನ ಮಾಡಲಾಯಿತು. ಸಮಾರಂಭದಲ್ಲಿ ಗಣ್ಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಆದರ್ಶ ವ್ಯಕ್ತಿತ್ವದ ಬೆಳಕು : ಇತರರಿಗೆ ಮಾದರಿಯಾಗುವ ಯಶಸ್ಸಿನ ದಾರಿ



**ಅಂತೋಣಿ ಮುತ್ತು ವಿ**
**ಶಿಕ್ಷಕರು, 7259675543**

ಇತರರಿಗೆ ಆದರ್ಶ ವ್ಯಕ್ತಿಯಾಗುವುದು ಜೀವನದ ಅತ್ಯುತ್ತಮ ಸಾಧನೆಗಳಲ್ಲಿ ಒಂದಾಗಿದೆ.ಆದರ್ಶ ವ್ಯಕ್ತಿ ತನ್ನ ಉತ್ತಮ ಗುಣಗಳು, ಪ್ರಾಮಾಣಿಕತೆ, ಶಿಸ್ತು ಮತ್ತು ಸಕಾರಾತ್ಮಕ ನಡವಳಿಕೆಯಿಂದ ಸಮಾಜದಲ್ಲಿ ಗೌರವವನ್ನು ಗಳಿಸುತ್ತಾನೆ. ಇತರರಿಗೆ ಮಾದರಿಯಾಗಬೇಕಾದರೆ ಮೊದಲು ನಮ್ಮ ವ್ಯಕ್ತಿತ್ವವನ್ನು ಉತ್ತಮಗೊಳಿಸಿಕೊಳ್ಳಬೇಕು. ಸತ್ಯವನ್ನು ಪಾಲಿಸುವುದು, ಸಮಯದ ಮಹತ್ವವನ್ನು ಅರಿಯುವುದು ಮತ್ತು ಜವಾಬ್ದಾರಿಯುತವಾಗಿ ವರ್ತಿಸುವುದು ಅತ್ಯಗತ್ಯ. ಜೊತೆಗೆ ನಿರಂತರವಾಗಿ ಹೊಸ ವಿಷಯಗಳನ್ನು ಕಲಿಯುವ ಮನೋಭಾವ ಹಾಗೂ ಕಠಿಣ ಪರಿಶ್ರಮವು ಯಶಸ್ಸಿನತ್ತ ಕೊಂಡೊಯ್ಯುತ್ತದೆ. ಯಶಸ್ವಿಯಾದ ವ್ಯಕ್ತಿಗಳು ತಮ್ಮ ಜ್ಞಾನ ಮತ್ತು ಅನುಭವವನ್ನು ಇತರರೊಂದಿಗೆ ಹಂಚಿಕೊಳ್ಳುವ ಮೂಲಕ ಅನೇಕರಿಗೆ ಪ್ರೇರಣೆಯಾಗುತ್ತಾರೆ.ಆದರ್ಶ ವ್ಯಕ್ತಿಯ ಮತ್ತೊಂದು ಪ್ರಮುಖ ಗುಣವೆಂದರೆ ಸಹಾಯ ಮಾಡುವ ಮನೋಭಾವ.ಅವರು ತಮ್ಮ ಸ್ವಾರ್ಥಕ್ಕಾಗಿ ಮಾತ್ರ ಬದುಕದೆ, ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸುತ್ತಾರೆ.

ಅಗತ್ಯವಿರುವವರಿಗೆ ನೆರವಾಗುವುದು,ಕಿರಿಯರಿಗೆ ಮಾರ್ಗದರ್ಶನ ನೀಡುವುದು ಹಾಗೂ ಎಲ್ಲರೊಂದಿಗೆ ಪ್ರೀತಿ ಮತ್ತು ಗೌರವದಿಂದ ನಡೆದುಕೊಳ್ಳುವುದು ಅವರ ವ್ಯಕ್ತಿತ್ವದ ವಿಶೇಷತೆಯಾಗಿದೆ. ಸವಾಲುಗಳು ಮತ್ತು ಕಷ್ಟಗಳು ಎದುರಾದಾಗಲೂ ಧೈರ್ಯ ಕಳೆದುಕೊಳ್ಳದೆ ಮುಂದೆ ಸಾಗುವ ವ್ಯಕ್ತಿಗಳು ನಿಜವಾದ ಆದರ್ಶರಾಗುತ್ತಾರೆ.ಅವರ ಜೀವನ ಶೈಲಿ,ಮಾತು ಮತ್ತು ಕಾರ್ಯಗಳು ಇತರರಿಗೆ ಸ್ಪೂರ್ತಿಯಾಗುತ್ತವೆ. ಆದ್ದರಿಂದ ಉತ್ತಮ ಗುಣಗಳನ್ನು ಬೆಳೆಸಿಕೊಂಡು, ಪರಿಶ್ರಮದಿಂದ ಗುರಿಗಳನ್ನು ಸಾಧಿಸಿ,ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡುವ ಮೂಲಕ ಪ್ರತಿಯೊಬ್ಬರೂ ಇತರರಿಗೆ ಆದರ್ಶ ವ್ಯಕ್ತಿಯಾಗಬಹುದು.ನಮ್ಮ ಒಳ್ಳೆಯ ನಡವಳಿಕೆ ಮತ್ತು ಸೇವಾ ಮನೋಭಾವವೇ ನಮ್ಮನ್ನು ಸಮಾಜದ ಬೆಳಕಾಗಿ ರೂಪಿಸುತ್ತದೆ.

# ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಹೊಳೆನರಸೀಪುರ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ 2026-27 ನೇ ಸಾಲಿಗೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಉಚಿತ ಪ್ರವೇಶಾತಿಗಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಹೊಳೆನರಸೀಪುರ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ವಿದ್ಯಾರ್ಥಿ ನಿಲಯಗಳ ಹೆಸರು: ಹೊಳೆನರಸೀಪುರ ಟೌನ್ ಡಾ.ಬಿ ಆರ್ ಅಂಬೇಡ್ಕರ್ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯ, ಹೊಳೆನರಸೀಪುರ ಟೌನ್ ಡಾ.ಬಿ ಆರ್ ಅಂಬೇಡ್ಕರ್ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯ, ಹೊಳೆನರಸೀಪುರ ಟೌನ್ ಡಾ.ಬಿ ಆರ್ ಅಂಬೇಡ್ಕರ್ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯ(ವೃತ್ತಿಪರ).

ಅರ್ಹ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ನಲ್ಲಿ ಜುಲೈ.31 ರೊಳಗೆ ಅರ್ಜಿ ಸಲ್ಲಿಸಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಂದ ದೃಡೀಕರಿಸಿ ಹೊಳೆನರಸೀಪುರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ(ಗ್ರೇಡ್-2) ಕಚೇರಿಗೆ ಸಲ್ಲಿಸಲು ತಿಳಿಸಿದ್ದಾರೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ನೇರವಾಗಿ ಸಂಪರ್ಕಿಸಬಹುದಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248